## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ-161 ಹೊಸಕೆರೆಹಳ್ಳಿ, ಬೆಂಗಳೂರು

ದಿನಾಂಕ : 18/06/2022

ಸಂ: ಸ.ಅ/ವಾ-161/2022-23

### ವಾರ್ಡ್ ಸಮಿತಿಯ ಸಭೆಯ ನಡವಳಿಗಳು

**ವಿಷಯ:-** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ :ಬಿ12(58)ಪಿಆರ್/35/2020-21 ದಿನಾಕ :21-09-2020 ರವರ ಆದೇಶದಂತೆ ದಿನಾಂಕ :18-06-2022 ರಂದು ವಾರ್ಡ್ ಸಂಖ್ಯೆ-161 ಹೊಸಕೆರೆಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ವಾರ್ಡ್ ಕಮಿಟಿ ಸಭೆ ನಿಗಧಿಪಡಿಸಿ ದಿನಾಂಕ :18-06-2022 ರಂದು ವಾರ್ಡ್ ಕಛೇರಿಯಲ್ಲಿ ಬೆಳಿಗ್ಗೆ 11.30 ಗಂಟೆಗೆ ಶ್ರೀ ಧರಣೇಂದ್ರಕುಮಾರ್ ನೋಡೆಲ್ ಅಧಿಕಾರಿಗಳು ರವರ ಅಧ್ಯಕ್ಷತೆಯಲ್ಲಿ ಹಾಗೂ ಶ್ರೀ ಕೀರ್ತಿ.ಹೆಚ್.ಆರ್ ಸದಸ್ಯ ಕಾರ್ಯದರ್ಶಿ ರವರ ಕಾರ್ಯಾಧ್ಯಕ್ಷತೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಡವಳಿಗಳು.

ಸಭೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರು ಹಾಜರಿರುತ್ತಾರೆ.

ಹಿಂದಿನ ವಾರ್ಡ್ ಸಭೆಯ ನಡವಳಿಗಳನ್ನು ಚರ್ಚಿಸಲಾಗಿರುತ್ತದೆ.

1) ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಹೊಸಕೆರೆಹಳ್ಳಿ ವಾರ್ಡ್ ಅಫೀಸ್‌ನಲ್ಲಿ ತಾತ್ಕಾಲಿಕವಾಗಿ ಪ್ರಾರಂಭಿಸಿ ನಂತರ ಹೊಸಕೆರೆಹಳ್ಳಿ ಆರೋಗ್ಯ ಕೇಂದ್ರದಲ್ಲಿ (ಪಿ.ಹೆಚ್.ಸಿ) ಪ್ರಾರಂಭಿಸಲು ಸಭೆಯಲ್ಲಿ ಚರ್ಚಿಸಲಾಗಿರುತ್ತದೆ.

2) ಬೆಸ್ಕಾಂ ಇಲಾಖೆಯಿಂದ ಕೇಬಲ್ ಅಳವಡಿಸಲು ಛೇಂಬರ್‌ಗಳನ್ನು ಮಾಡಲಾಗಿದ್ದು, ಛೇಂಬರ್ ಸುತ್ತ ~~ಯಥಾಸ್ಥಿತಿಯನ್ನು~~ ಸುಸ್ಥಿತಿ ಕಾಪಾಡಲು ಸಭೆಯಲ್ಲಿ ಮಾನ್ಯ ನೋಡೆಲ್ ಅಧಿಕಾರಿಯವರು ತಿಳಿಸಿರುತ್ತಾರೆ.

3) ಬೆಸ್ಕಾಂ ಇಲಾಖೆಯಿಂದ ಕೃಷ್ಣ ದೇವಸ್ಥಾನದ ಹತ್ತಿರ ತೆರದ ರೀತಿಯಲ್ಲಿ ರಸ್ತೆ ಅಗೆಯಬೇಕಾಗಿರುವುದಾಗಿ ಸಹಾಯಕ ಅಭಿಯಂತರರು ಸಭೆಯಲ್ಲಿ ಕೋರಿದಾಗ, ಸದರಿ ಕಾಮಗಾರಿಯು ಸರ್ಕಾರದ ಆದೇಶ ಸಂಖ್ಯೆ :ನಇ :210 :ಎಂ.ಎನ್.ವೈ :2017, ದಿನಾಂಕ :10-12-2018. ಮತ್ತು ಮುಖ್ಯ ಆಯುಕ್ತರವರ ಕಛೇರಿ ಆದೇಶ ಸಂಖ್ಯೆ :ಬಿಬಿಎಂಪಿ/ಆಕಾ/ಪಿಆರ್/08/2022-23 ದಿನಾಂಕ :18-04-2022 ರಂತೆ ಕ್ರಮ ವಹಿಸಲು ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಬೆಸ್ಕಾಂ ಅಧಿಕಾರಿಗಳಿಗೆ ಸೂಚಿಸಿರುತ್ತಾರೆ.

4) ಹೊಸಕೆರೆಹಳ್ಳಿ 7ನೇ ಮುಖ್ಯರಸ್ತೆಗೆ ನಾಮಫಲಕ ಅಳವಡಿಸುವಂತೆ ಸಾರ್ವಜನಿಕರು ಕೋರಿದಾಗ, ಸಭೆಯಲ್ಲಿದ್ದ ವಾರ್ಡ್ ಅಭಿಯಂತರರು ಪ್ರಸ್ತುತ ವಾರ್ಷಿಕ ಕ್ರಿಯಾ ಯೋಜನೆಯಲ್ಲಿ ಸೇರಿಸಿಕೊಂಡು ಎಲ್ಲಿ ಇಲ್ಲವೇ ಅಂತಹ ಕಡೆಗಳಲ್ಲಿ ನಾಮಫಲಕಗಳನ್ನು ಅಳವಡಿಸುವುದಾಗಿ ಸಭೆಯಲ್ಲಿ ತಿಳಿಸಿರುತ್ತಾರೆ.

5) ವಾರ್ಡ್ ಪ್ರದೇಶದಲ್ಲಿ ಕಾಲರಾ ಹೆಚ್ಚಾಗುತ್ತಿದ್ದು, ಸಾರ್ವಜನಿಕರಲ್ಲಿ ಅರಿವು ಮೂಡಿಸುವಂತೆ ಮಾನ್ಯ ಅಧ್ಯಕ್ಷರು ಸಭೆಗೆ ತಿಳಿಸಿರುತ್ತಾರೆ.

6) ವಾರ್ಡ್ ಪ್ರದೇಶದಲ್ಲಿ ಎಲ್.ಇ.ಡಿ ಬೀದಿ ದೀಪಗಳನ್ನು ಅಳವಡಿಸಲಾಗಿದ್ದು, ನಿಗಧಿತ ಸಮಯಕ್ಕೆ ಆನ್ ಅಂಡ್ ಆಫ್ ಮಾಡುವಂತೆ ಸಾರ್ವಜನಿಕರು ಸಭೆಗೆ ಕೋರಿದಾಗ ಮಾನ್ಯ ಅಧ್ಯಕ್ಷರು ಕೂಡಲೇ ಕ್ರಮ ವಹಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

7) ದ್ವಾರಕಾನಗರದಲ್ಲಿರುವ ದೊಡ್ಡ ಮಳೆ ನೀರು ಚರಂಡಿಯಲ್ಲಿ ಹೂಳು ತುಂಬಿದ್ದು, ಹೂಳನ್ನು ತೆರವು ಮಾಡುವಂತೆ ಸಭೆಯಲ್ಲಿ ಸಾರ್ವಜನಿಕರು ಕೋರಿದಾಗ, ಮಾನ್ಯ ಅಧ್ಯಕ್ಷರು ಕೂಡಲೇ ಕ್ರಮ ವಹಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

8) ಪ್ರತಿ ಮಂಗಳವಾರ ಪಾದಚಾರಿ ಮಾರ್ಗವನ್ನು ತೆರವುಗೊಳಿಸುವಂತೆ ಹಾಗೂ ಪ್ರತಿ ಶುಕ್ರವಾರ ಸ್ವಚ್ಛತಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವಂತೆ ಮಾನ್ಯ ನೋಡೆಲ್ ಅಧಿಕಾರಿಯವರು ಸಭೆಗೆ ತಿಳಿಸಿರುತ್ತಾರೆ.

ಮಾನ್ಯ ಆಯುಕ್ತರವರ ಸೂಚನೆಯಂತೆ ಪ್ರತಿ ಒಂದನೇ ಹಾಗೂ ಮೂರನೇ ಶನಿವಾರದಂದು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲು ಹಾಗೂ ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರಲು ಕೋರುತ್ತಾ ಮತ್ತು ಮುಂದಿನ ಸಭೆಯಲ್ಲಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಶನ್ ರವರನ್ನು ಹೆಚ್ಚಿನ ಸಂಖ್ಯೆಯಲ್ಲಿ ಆಹ್ವಾನಿಸಲು ಸಂಚಾಲಕರಿಗೆ ಸೂಚಿಸಿ ಸಭೆಯಲ್ಲಿ ಯಾವುದೇ ಪ್ರಸ್ತಾವನೆ ಮಾಡದಿದ್ದ ಕಾರಣ ನೋಡಲ್ ಅಧಿಕಾರಿ/ಅಧ್ಯಕ್ಷರ ಅಪ್ಪಣೆ ಮೇರೆಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Keerthi H.R
ವಾರ್ಡ್ ಸಮಿತಿ ಸಂಚಾಲಕರು

18/06/2022
ವಾರ್ಡ್ 161 ರ ನೋಡಲ್ ಅಧಿಕಾರಿ.